ಹೆಚ್ಚುವರಿ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಎ.ಸಿ.ಜೆ.ಎಂ. ನ್ಯಾಯಾಲಯ,
ಉಡುಪಿ.

ಸಿ.ಸಿ.:55/2021
ಸಿ.ಡಬ್ಲ್ಯು 4 ಪಿ.ಡಬ್ಲ್ಯೂ : 3

| | |
|---|---|
| ಸಾಕ್ಷಿದಾರರ ಹೆಸರು | ಮಹಬೂಬ್ |
| ತಂದೆಯ ಹೆಸರು | ಗೌಸ್ ಸಾಹೇಬ್ |
| ವಯಸ್ಸು | 63 ವರ್ಷ |
| ಉದ್ಯೋಗ | ಕೂಲಿ ಕೆಲಸ |
| ವಾಸಸ್ಥಳ | ಕಟಪಾಡಿ ಮೂಡುಬೆಟ್ಟು |

ದಿನಾಂಕಃ 06-03-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದಃ**

ಚಾಸಾ 1ರವರು ನನ್ನ ನೆರೆ ಹೊರೆಯವರು. ಸಾಕ್ಷಿಯವರು 4 ಭಾವಚಿತ್ರಗಳನ್ನು ನೋಡಿ ಅವುಗಳಲ್ಲಿ ಕಾಣುವ ಕೆಎ 07 5094 ಸಂಖ್ಯೆಯ ವಾಹನವನ್ನು ನನ್ನ ಮಗನ ಹೆಸರಿನಲ್ಲಿ ಖರೀದಿ ಮಾಡಿರುತ್ತೇವೆ. 4 ಭಾವಚಿತ್ರಗಳನ್ನು ಒಟ್ಟಾಗಿ ನಿಪಿ 4 ಎಂದು ಗುರುತಿಸಲಾಯಿತು. ನನ್ನ ಮಗ ವಿದೇಶದಲ್ಲಿ ಕೆಲಸದಲ್ಲಿ ಇರುತ್ತಾರೆ. ನನ್ನ ಮಗ ವಿದೇಶಕ್ಕೆ ಹೋಗುವ ಮೊದಲು ಜಿಪಿಎ ಮಾಡಿಕೊಟ್ಟಿರುತ್ತಾರೆ. ಚಾಸಾ 1ರವರು ಭಾವಚಿತ್ರದಲ್ಲಿ ಕಾಣುವ ವಾಹನವನ್ನು ಬಾಡಿಗೆಗೆ ಎಂದು ತೆಗೆದುಕೊಂಡು ಹೊಜಾಗಿ ಘಟನಗೆ ಬಳಸಿರುವ ವಿಚಾರ ನನಗೆ ಗೊತ್ತಿಲ್ಲ. ಈ ಬಗ್ಗೆ ನಾನು ಯಾವುದೇ ಹೇಕಿಕೆಯನ್ನು ನೀಡಿರುವುದಿಲ್ಲ.

ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರು ಸಾಕ್ಷಿಯನ್ನು ಭಾಗಶಃ ಪ್ರತಿ ಕೂಲ ಸಾಕ್ಷಿ ಎಂದು ತಿಳಿಸಿ ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ ಅನುಮತಿಯನ್ನು ನೀಡಲಾಯಿತು.

**ಸಿ.ಡಬ್ಲ್ಯು 4 ಪಿ.ಡಬ್ಯೂ : 3**

**ಪಾಟೀ ಸವಾಲುಃ ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿಃ 06-07-201 ರಂದು ಚಾಸಾ 1 ರವರು ಹಿರಿಯಡ್ಕದಿಂದ ಸಾಮಾನು ತರಲು ನಿಪಿ 4 ರಲ್ಲಿ ಕಾಣುವ ವಾಹನವು ಬೇಕು ಎಂಂದು ಕೇಳಿ ಚಾಸಾ 2 ರವರೊಂದಿಗೆ ಸೇರಿ ತೆಗೆದುಕೊಂಡು ಹೋಗಿದ್ದರು ಎಂದರೆ ಸರಿಯಲ್ಲ. ಚಾಸಾ 1 ಮತ್ತು 2 ರವರು ಮಾಂಸ ಮಾಡುವ ಉದ್ದೇಶದಿಂದ ದನಗಳನ್ನು ಹಿಂಸಾತ್ಮಕವಾಗಿ ವಾಹನದಲ್ಲಿ ತುಂಬಿ ಕೊಂಡು ಬರುತ್ತಿದ್ದರು ಎಂದರೆ ಸರಿಯಲ್ಲ. ಅದನ್ನು ಗಮನಿಸಿದ ಆರೋಪಿತರು ಟೆಂಪೋವನ್ನು ಅಡ್ಡ ಗಟ್ಟಿ ಚಾಸಾ 1 ರವರಿಗೆ ಕೈಯಿಂದ ಹಲ್ಲೆ ಮಾಡಿ, ವಾಹನವನ್ನು ಜಖಂ ಮಾಡಿ, ಅವರನ್ನು ಅಪಹರಿಸಿ ಜೀವ ಬೆದರಿಕೆ ಹಾಕಿರುತ್ತಾರೆ ಎಂದು ನಿಮಗೆ ತಿಳಿದಿರುತ್ತದೆ ಎಂದರೆ ಸರಿಯಲ್ಲ. ಈ ಬಗ್ಗೆ ಪೊಲೀಸಿನವರಿಗೆ ಹೇಳಿಕೆಯನ್ನು ನೀಡಿರುತ್ತೀರಿ ಎಂದರೆ ಸರಿಯಲ್ಲ.

ಸಾಕ್ಷಿಯವರಿಗೆ ದಿಃ 11-08-2021 ರಂದು ಹೇಳಿಕೆಯನ್ನು ನೀಡಿರುತ್ತೀರಿ ಎಂದರೆ ಸರಿಯಲ್ಲ. ಸಾಕ್ಷಿಯವರಿಗೆ ಓದಿ ಹೇಳಿದ್ದು ಹೇಳಿಕೆಯನ್ನು ನಿರಾಕರಿಸಿರುತ್ತಾರೆ ಹೇಳಿಕೆಯನ್ನು ನಿಪಿ.5 ಎಂದು ಗುರುತಿಸಲಾಯಿತು. ಆರೋಪಿಯವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿಯವರ ಪರ ಶ್ರೀ ಡಿ. ಸಿ ಎಸ್ ವಕೀಲರಿಂದಃ**
ಪಾಟೀ ಸವಾಲು ಇಲ್ಲವೆಂದು ಮನವಿ ಮಾಡಿರುತ್ತಾರೆ.

ಮರು ವಿಚಾರಣೆಃ ಇಲ್ಲ.

(ತೆರದ ನ್ಯಾಯಾಲಯದಲ್ಲಿ ಸಾಕ್ಷಿಯ ಸಾಕ್ಷ್ಯವನ್ನು ನನ್ನ ಉಕ್ತಲೇಖನದ ರೀತ್ಯಾ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೇ.ಸರಿ ಇದೆ ಎಂದು ಒಪ್ಪಿದ್ದೇನೆ.

ಹೆ.ಹಿ.ಸಿ.ನ್ಯಾ ಮತ್ತು ಎಸಿಜೆಎಂ ಉಡುಪಿ.